**ಸಾಕ್ಷಿಗೆ ದಿನಾಂಕ 23-07-2026 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ಶ್ರೀಮತಿ ಟಿ ಎಲ್ ವಕೀಲರು ಶ್ರೀ ವಿ ಎಸ್ ವಕೀಲರ ಪರವಾಗಿ:**

**1.** ನಾನು ಬೆಂಗಳೂರಿನ ಲೈಫ್ ಕೇರ್ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಎಂ ಆರ್ ಓ ಆಗಿದ್ದು, ಅರ್ಜಿದಾರರ ಪರ ಸಾಕ್ಷಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

**2.** ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ:

| | |
|---|---|
| ನಿ.ಪಿ.19 | ಅಧಿಕಾರ ಪತ್ರ |
| ನಿ.ಪಿ.20 | ಪೊಲೀಸ್ ಇಂಟಿಮೇಷನ್ ನ ದೃಢೀಕೃತ ಪ್ರತಿ (ಮೂಲ ದಾಖಲೆ ನೋಡಿ ಹಿಂದಿರುಗಿಸಲಾಯಿತು) |
| ನಿ.ಪಿ.21 | ಎಂ ಎಲ್ ಸಿ ರಿಜಿಸ್ಟರ್ ಎಕ್ಸ್ ಟ್ರಾಕ್ಟ್ ನ ದೃಢೀಕೃತ ಪ್ರತಿ (ಮೂಲ ದಾಖಲೆ ನೋಡಿ ಹಿಂದಿರುಗಿಸಲಾಯಿತು) |
| ನಿ.ಪಿ.22 | ಕೇಸ್ ಶೀಟ್ |

**ಪಾಟೀ ಸವಾಲುಃ 1ನೇ ಎದುರುದಾರರ ಪರ ಶ್ರೀಮತಿ ಎಸ್ ಜಿ ವಕೀಲರು ಶ್ರೀ ವಿ ಆರ್ ಎಂ ವಕೀಲರ ಪರವಾಗಿಃ**

1. ನಾನು ಕಳೆದ 3 ವರ್ಷಗಳಿಂದ ಈ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದೇನೆ. ಅರ್ಜಿದಾರರಿಗೆ ಚಿಕಿತ್ಸೆ ನೀಡಿದ ವೈದ್ಯರು ಈಗಲೂ ನಮ್ಮ ಆಸ್ಪತ್ರೆಯಲ್ಲಿ ಕೆಲಸದ ಮೇಲೆ ಇದ್ದರೋ ಇಲ್ಲವೋ ಎಂದು ನನಗೆ ಗೊತ್ತಿಲ್ಲ. ಅರ್ಜಿದಾರರಿಗೆ ನೀಡಿದ ಚಿಕಿತ್ಸೆಯ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ನಾನು ಹಾಜರುಪಡಿಸಿರುವ ನಿಪಿ.20 ರಿಂದ 22 ರಲ್ಲಿರುವ ಮಾಹಿತಿ ನನಗೆ ಗೊತ್ತಿರುವುದಿಲ್ಲ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ನಿಪಿ.20 ರಿಂದ 22 ರ ದಾಖಲೆಗಳನ್ನು ನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2ನೇ ಎದುರುದಾರರು ಏಕ-ಪಕ್ಷೀಯ. ಆದ್ದರಿಂದ ಅವರ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರು-ವಿಚಾರಣೆಃ ಇಲ್ಲ.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**
**(ಓ. ಹೇ. ಕೇ. ಸ.ಇ)**

(ಧನೇಶ್ ಮುಗಳಿ)
**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**